# ಕರ್ನಾಟಕ ಸರ್ಕಾರದ ನಡವಳಿಗಳು

ವಿಷಯ ಕರ್ನಾಟಕ ರಾಜ್ಯದ ಬೆಂಗಳೂರು ನಗರದಲ್ಲಿ ಹೆಚ್ಚುವರಿಯಾಗಿ 6 ವಿಶೇಷ ವಾಣಿಜ್ಯ ನ್ಯಾಯಾಲಯಗಳನ್ನು ಸ್ಥಾಪಿಸುವ ಬಗ್ಗೆ.

******

**ಓದಲಾಗಿದೆ:**

ರಿಜಿಸ್ಟ್ರಾರ್ ಜನರಲ್, ಕರ್ನಾಟಕ ಉಚ್ಚ ನ್ಯಾಯಾಲಯ, ಬೆಂಗಳೂರು ಇವರ ಪತ್ರ ಸಂಖ್ಯೆ: GOB.II. 88/2016, ದಿನಾಂಕ: 26.12.2019.

**ಪ್ರಸ್ತಾವನೆ:**

ಮೇಲೆ ಓದಲಾದ ಪತ್ರದಲ್ಲಿ, ರಿಜಿಸ್ಟ್ರಾರ್, ಸಿಟಿ ಸಿವಿಲ್ ನ್ಯಾಯಾಲಯ, ಬೆಂಗಳೂರು ಇವರು ಈಗಾಗಲೇ ಬೆಂಗಳೂರು ಸಿಟಿ ಸಿವಿಲ್ ನ್ಯಾಯಾಲಯದಲ್ಲಿ ಕಾರ್ಯಾರಂಭಗೊಂಡಿರುವ 02 ವಿಶೇಷ ವಾಣಿಜ್ಯ ನ್ಯಾಯಾಲಯಗಳಲ್ಲಿ ಬಾಕಿ ಇರುವ ಪ್ರಕರಣಗಳೂ ಸೇರಿದಂತೆ ಒಟ್ಟು 7030 ವಿವಿಧ ಸ್ವರೂಪದ ವಾಣಿಜ್ಯ ಪ್ರಕರಣಗಳು ಬಾಕಿ ಇರುತ್ತವೆ ಎಂದು ತಿಳಿಸಿರುತ್ತಾರೆ.

ಮುಂದುವರೆದು, ಕಾರ್ಯದರ್ಶಿಗಳು, ಕಾನೂನು ಮತ್ತು ನ್ಯಾಯ ಮಂತ್ರಾಲಯ, ನವದೆಹಲಿ ಇವರು, ದಿನಾಂಕ: 20.12.2019ರ ಪತ್ರದಲ್ಲಿ ರಿಜಿಸ್ಟ್ರಾರ್ ಜನರಲ್, ಕರ್ನಾಟಕ ಉಚ್ಚ ನ್ಯಾಯಾಲಯ, ಬೆಂಗಳೂರು ಇವರನ್ನು ರಾಜ್ಯದಲ್ಲಿ Dedicated Commercial ನ್ಯಾಯಾಲಯಗಳನ್ನು ಸ್ಥಾಪಿಸಲು ಜರೂರು ಅಗತ್ಯ ಕ್ರಮ ಕೈಗೊಳ್ಳುವಂತೆ ಕೋರಿರುತ್ತಾರೆ.

ಬೆಂಗಳೂರು ನಗರದಲ್ಲಿ ಈಗಾಗಲೇ 02 Dedicated Commercial ನ್ಯಾಯಾಲಯಗಳು ಕಾರ್ಯ ನಿರ್ವಹಿಸುತ್ತಿವೆ. ಆದರೆ The Commercial Courts Act, 2015 ರನ್ವಯ ಎಲ್ಲಾ ವಾಣಿಜ್ಯ ಪ್ರಕರಣಗಳನ್ನು ಶೀಘ್ರಗತಿಯಲ್ಲಿ ವಿಲೇವಾರಿ ಮಾಡುವುದು ಕಡ್ಡಾಯವಾಗಿರುತ್ತದೆ. ಆದ್ದರಿಂದ, ಪ್ರತಿ 1000 ಪ್ರಕರಣಗಳ ಬದಲಾಗಿ ಪ್ರತಿ 750 ಪ್ರಕರಣಗಳಿಗೆ ತಲಾ ಒಂದು ವಾಣಿಜ್ಯ ನ್ಯಾಯಾಲಯವನ್ನು ಸ್ಥಾಪಿಸುವುದು ಸೂಕ್ತವಾಗಿರುತ್ತದೆ. ಬೆಂಗಳೂರು ನಗರ ಜಿಲ್ಲೆಯು ಮೆಟ್ರೊಪಾಲಿಟನ್ ಸಿಟಿ ಹಾಗೂ I.T.Hub ಆಗಿದ್ದು, ಮುಂಬರುವ ದಿನಗಳಲ್ಲಿ ಇನ್ನೂ ಹೆಚ್ಚಿನ ಪ್ರಕರಣಗಳು ದಾಖಲಾಗುವ ಸಾಧ್ಯತೆ ಇರುತ್ತದೆ.

ಆದ್ದರಿಂದ, ಬೆಂಗಳೂರು ನಗರದಲ್ಲಿ ಈಗಾಗಲೇ ಸ್ಥಾಪಿಸಲಾದ 02 Dedicated Commercial ನ್ಯಾಯಾಲಯಗಳನ್ನು ಹೊರತುಪಡಿಸಿ ಇನ್ನೂ 06 Dedicated Commercial ನ್ಯಾಯಾಲಯಗಳನ್ನು ಅತೀ ಜರೂರಾಗಿ ಸ್ಥಾಪಿಸುವ ಅಗತ್ಯತೆ ಇರುತ್ತದೆ. ಈ ಹಿನ್ನೆಲೆಯಲ್ಲಿ, ಬೆಂಗಳೂರು ನಗರದಲ್ಲಿ ಇನ್ನೂ 06 Dedicated Commercial ನ್ಯಾಯಾಲಯಗಳನ್ನು ಸ್ಥಾಪಿಸುವಂತೆ ಹಾಗೂ ಸದರಿ ನ್ಯಾಯಾಲಯಗಳಿಗೆ ಈ ಕೆಳಕಂಡಂತೆ ಅಗತ್ಯ ಪೂರಕ ಅಧಿಕಾರಿ ಮತ್ತು ಸಿಬ್ಬಂದಿ ಹುದ್ದೆಗಳನ್ನು ಸೃಜಿಸಿ, ಈ ನ್ಯಾಯಾಲಯಗಳ ವೆಚ್ಚ ಭರಿಸುವ ಲೆಕ್ಕ ಶೀರ್ಷಿಕೆಯನ್ನು ಒದಗಿಸಿ, ಸೂಕ್ತ ಸರ್ಕಾರಿ ಆದೇಶವನ್ನು ಹೊರಡಿಸುವಂತೆ ರಿಜಿಸ್ಟ್ರಾರ್ ಜನರಲ್, ಕರ್ನಾಟಕ ಉಚ್ಚ ನ್ಯಾಯಾಲಯ ಇವರ ಪತ್ರದಲ್ಲಿ ಕೋರಿರುತ್ತಾರೆ.

| ಕ್ರ. ಸಂ. | ಹುದ್ದೆಗಳ ವಿವರ | ಸೃಜಿಸಲು ಪ್ರಸ್ತಾಪಿಸಲಾದ ಹುದ್ದೆಗಳ ಸಂಖ್ಯೆ |
|---|---|---|
| 1 | ಹೆಚ್ಚುವರಿ ಜಿಲ್ಲಾ ನ್ಯಾಯಾಧೀಶರು | 01 |
| 2 | ಶಿರಸ್ತೇದಾರ್ | 02 |
| 3 | ತೀರ್ಪು ಬರಹಗಾರರು | 02 |
| 4 | ಪ್ರಥಮ ದರ್ಜೆ ಸಹಾಯಕರು | 02 |
| 5 | ದ್ವಿತೀಯ ದರ್ಜೆ ಸಹಾಯಕರು | 02 |
| 6 | ಬೆರಳಚ್ಚುಗಾರರು | 01 |
| 7 | ಅಟೆಂಡರ್ | 01 |
| 8 | ಪ್ಯೂನ್ | 02 |
| **ಒಟ್ಟು ( ಪ್ರತಿ ನ್ಯಾಯಾಲಯಕ್ಕೆ)** | | **13** |

ಸದರಿ ಪ್ರಸ್ತಾವನೆಯನ್ನು ಪರಿಶೀಲಿಸಿ, ಸರ್ಕಾರವು ಈ ಕೆಳಗಿನಂತೆ ಆದೇಶಿಸಿದೆ.

**ಸರ್ಕಾರಿ ಆದೇಶ ಸಂಖ್ಯೆ: ಲಾ / ಎಲ್‌ಸಿಇ / 73 / 2019,**

**ಬೆಂಗಳೂರು, ದಿನಾಂಕ: 31.12.2019.**

ಬೆಂಗಳೂರು ನಗರದಲ್ಲಿ ಈಗಾಗಲೇ ಕಾರ್ಯನಿರ್ವಹಿಸುತ್ತಿರು 2 ವಿಶೇಷ ವಾಣಿಜ್ಯ ನ್ಯಾಯಾಲಯಗಳನ್ನು ಹೊರತುಪಡಿಸಿ, ಬೆಂಗಳೂರು ನಗರದಲ್ಲಿ

ಹೆಚ್ಚುವರಿಯಾಗಿ 06 Dedicated Commercial ನ್ಯಾಯಾಲಯಗಳನ್ನು ಸ್ಥಾಪಿಸಲು ಸರ್ಕಾರದ ಮಂಜೂರಾತಿ ನೀಡಿ ಆದೇಶಿಸಿದೆ.

ಪ್ರತಿ ನ್ಯಾಯಾಲಯಗಳಿಗೆ ಈ ಕೆಳಕಂಡಂತೆ 13 ವಿವಿಧ ವೃಂದದ ಅಧಿಕಾರಿ ಮತ್ತು ಪೂರಕ ಸಿಬ್ಬಂದಿ ಹುದ್ದೆಗಳನ್ನು (ಒಟ್ಟು-78 ಹುದ್ದೆಗಳು) ಸೃಜಿಸಲು ಸರ್ಕಾರದ ಮಂಜೂರಾತಿಯನ್ನು ನೀಡಿದೆ.

| ಕ್ರ. ಸಂ. | ಹುದ್ದೆಗಳ ವಿವರ | ಸೃಜಿಸಲು ಪ್ರಸ್ತಾಪಿಸಲಾದ ಹುದ್ದೆಗಳ ಸಂಖ್ಯೆ |
|---|---|---|
| 1 | ಹೆಚ್ಚುವರಿ ಜಿಲ್ಲಾ ನ್ಯಾಯಾಧೀಶರು | 01 |
| 2 | ಶಿರಸ್ತೇದಾರ್ | 02 |
| 3 | ತೀರ್ಪು ಬರಹಗಾರರು | 02 |
| 4 | ಪ್ರಥಮ ದರ್ಜೆ ಸಹಾಯಕರು | 02 |
| 5 | ದ್ವಿತೀಯ ದರ್ಜೆ ಸಹಾಯಕರು | 02 |
| 6 | ಬೆರಳಚ್ಚುಗಾರರು | 01 |
| 7 | ಅಟೆಂಡರ್ | 01 |
| 8 | ಪ್ಯೂನ್ | 02 |
| **ಒಟ್ಟು (ಪ್ರತಿ ನ್ಯಾಯಾಲಯಕ್ಕೆ)** | | **13** |

2. ಈ ಆದೇಶವನ್ನು ಆರ್ಥಿಕ ಇಲಾಖೆಯ ಅನಧಿಕೃತ ಟಿಪ್ಪಣಿ / ಹಿಂಬರಹ ಸಂಖ್ಯೆ: ಆಇ 263 ವೆಚ್ಚ-10/2019, ದಿನಾಂಕ: 30.12.2019 ರಂದು ನೀಡಿರುವ ಸಹಮತಿಯ ಮೇರೆಗೆ ಹೊರಡಿಸಿದೆ.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ
ಮತ್ತು ಅವರ ಹೆಸರಿನಲ್ಲಿ,

(ಜಿ. ಹರೀಶ್ ಕುಮಾರ್) 31/12
ಸರ್ಕಾರದ ಅಧೀನ ಕಾರ್ಯದರ್ಶಿ (ಆಡಳಿತ-1),
ಕಾನೂನು ಇಲಾಖೆ.

ಇವರಿಗೆ:

1. ಪ್ರಧಾನ ಮಹಾಲೇಖಪಾಲರು (ಎ. ಮತ್ತು ಇ.) / (ಲೆಕ್ಕಪರಿಶೋಧನೆ-1 ) / (ಲೆಕ್ಕಪರಿಶೋಧನೆ-2 ), ಕರ್ನಾಟಕ, ಬೆಂಗಳೂರು.

2. ಮಾನ್ಯ ಸರ್ಕಾರದ ಮುಖ್ಯ ಕಾರ್ಯದರ್ಶಿಯವರು, ವಿಧಾನ ಸೌಧ, ಬೆಂಗಳೂರು.
3. ರಿಜಿಸ್ಟ್ರಾರ್ ಜನರಲ್ ರವರು, ಕರ್ನಾಟಕ ಉಚ್ಚ ನ್ಯಾಯಾಲಯ, ಬೆಂಗಳೂರು
4. ಪ್ರಧಾನ ಸಿಟಿ ಸಿವಿಲ್ ಮತ್ತು ಸತ್ರ ನ್ಯಾಯಾಧೀಶರು, ಬೆಂಗಳೂರು ನಗರ, ಬೆಂಗಳೂರು.
5. ಸರ್ಕಾರದ ಪ್ರಧಾನ ಕಾರ್ಯದರ್ಶಿಯವರು, ವಾಣಿಜ್ಯ ಮತ್ತು ಕೈಗಾರಿಕೆ ಇಲಾಖೆ, ವಿಕಾಸ ಸೌಧ, ಬೆಂಗಳೂರು.
6. ಮಾನ್ಯ ಕಾನೂನು, ಸಂಸದೀಯ ವ್ಯವಹಾರಗಳು ಮತ್ತು ಸಣ್ಣ ನೀರಾವರಿ ಸಚಿವರ ಆಪ್ತ ಕಾರ್ಯದರ್ಶಿಯವರು, ವಿಧಾನ ಸೌಧ, ಬೆಂಗಳೂರು-1
7. ಸರ್ಕಾರದ ಪ್ರಧಾನ ಕಾರ್ಯದರ್ಶಿಯವರ ಆಪ್ತ ಕಾರ್ಯದರ್ಶಿಯವರು, ಕಾನೂನು ಇಲಾಖೆ, ವಿಧಾನ ಸೌಧ, ಬೆಂಗಳೂರು-1
8. ಸರ್ಕಾರದ ವಿಶೇಷ ಕಾರ್ಯದರ್ಶಿಯವರು, ಕಾನೂನು ಇಲಾಖೆ, ವಿಧಾನ ಸೌಧ, ಬೆಂಗಳೂರು-1
9. ಸರ್ಕಾರದ ಅಧೀನ ಕಾರ್ಯದರ್ಶಿಯವರು, ಆರ್ಥಿಕ ಇಲಾಖೆ (ವೆಚ್ಚ-2 ಮತ್ತು 10), ವಿಧಾನ ಸೌಧ, ಬೆಂಗಳೂರು-1
10. ಸರ್ಕಾರದ ಉಪ ಕಾರ್ಯದರ್ಶಿ (ಆಡಳಿತ-1) ರವರ ಆಪ್ತ ಸಹಾಯಕರು,, ಕಾನೂನು ಇಲಾಖೆ, ವಿಧಾನ ಸೌಧ, ಬೆಂಗಳೂರು-1
11. ಶಾಖಾ ರಕ್ಷಾ ಕಡತ / ಹೆಚ್ಚುವರಿ ಪ್ರತಿಗಳು.